**All India Radio: Bangalore**
**National Bulletin In Kannada**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**20.08.2026 19.35 hrs**

---

ಮುಖ್ಯಾಂಶಗಳು

೧. ದೆಹಲಿ ಪ್ರತಿಭಟನಾಕಾರರ ಮೇಲೆ ಪೊಲೀಸ್ ಬಲಪ್ರಯೋಗ ಆರೋಪ: ಐದು ಸದಸ್ಯರ ಉನ್ನತ ಸಮಿತಿ ರಚಿಸಿದ ಸರ್ವೋಚ್ಚ ನ್ಯಾಯಾಲಯ

೨. ಜಪಾನ್ ರಕ್ಷಣಾ ಸಚಿವರೊಂದಿಗೆ ಕೇಂದ್ರ ಸಚಿವ ರಾಜನಾಥ್ ಸಿಂಗ್ ಮಾತುಕತೆ

೩. ಭಾರತದ ಅಧ್ಯಕ್ಷತೆಯಲ್ಲಿ ಪುಣೆಯಲ್ಲಿ ನಾಳೆ ಹನ್ನೆರಡನೇ ಬ್ರಿಕ್ಸ್ ಸಂವಹನ ಸಚಿವರ ಸಭೆ

೪. ಬಿಡಬ್ಲ್ಯುಎಫ್ ವಿಶ್ವ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್: ಮಹಿಳಾ ಡಬಲ್ಸ್ ವಿಭಾಗದ ಕ್ವಾರ್ಟರ್‌ಫೈನಲ್‌ಗೆ ತ್ರೀಸಾ ಜಾಲಿ-ಗಾಯತ್ರಿ ಗೋಪಿಚಂದ್ ಲಗ್ಗೆ

---

ಇತ್ತೀಚೆಗೆ ದೆಹಲಿಯಲ್ಲಿ ಪ್ರತಿಭಟನಾಕಾರರ ಮೇಲೆ ಪೊಲೀಸರ ಬಲಪ್ರಯೋಗ ಆರೋಪಗಳ ಕುರಿತು ಪರಿಶೀಲಿಸಲು ಸುಪ್ರೀಂ ಕೋರ್ಟ್ ನಿವೃತ್ತ ನ್ಯಾಯಮೂರ್ತಿ ಆರ್.ಸುಭಾಷ್ ರೆಡ್ಡಿ ನೇತೃತ್ವದಲ್ಲಿ ಐದು ಸದಸ್ಯರ ಉನ್ನತ ಸಮಿತಿಯನ್ನು ಸರ್ವೋಚ್ಚ ನ್ಯಾಯಾಲಯ ರಚಿಸಿದೆ.

ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿಗಳಾದ ಜೋಯ್ಮಲ್ಯ ಬಾಗ್ಚಿ ಮತ್ತು ವಿ.ಮೋಹನ ಅವರಿದ್ದ ನ್ಯಾಯಪೀಠ, ಸಮಿತಿಯು ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್‌ನ ನಿವೃತ್ತ ಮುಖ್ಯ ನ್ಯಾಯಮೂರ್ತಿ ರವಿಶಂಕರ್ ಝಾ, ದೆಹಲಿ ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಶಾಲಿಂದರ್ ಕೌರ್, ಸಿಬಿಐ ಮಾಜಿ ನಿರ್ದೇಶಕ ರಿಷಿ ಕುಮಾರ್ ಶುಕ್ಲಾ ಮತ್ತು ಮೇಘಾಲಯ ನಿವೃತ್ತ ಡಿಜಿಪಿ ಎಲ್.ಆರ್.ಬಿಷ್ಣೋಯ್ ಅವರನ್ನು ಒಳಗೊಂಡಿದೆ ಎಂದು ತಿಳಿಸಿದೆ.

ಕಳೆದ ಜುಲೈ ೨೦ ರಂದು ದೆಹಲಿಯಲ್ಲಿ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ವಿರೋಧಿಸಿ, ಕಾಕ್ರೋಚ್ ಜನತಾ ಪಕ್ಷದ ನೇತೃತ್ವದಲ್ಲಿ ನಡೆದ ಸಂಸತ್ ಚಲೋ ಪ್ರತಿಭಟನೆಯು ಹಿಂಸಾತ್ಮಕ ಘರ್ಷಣೆಗೆ ಕಾರಣವಾಯಿತು. ಈ ವೇಳೆ ಪ್ರತಿಭಟನಾಕಾರರು ಮತ್ತು ಭದ್ರತಾ ಸಿಬ್ಬಂದಿ ಸೇರಿದಂತೆ ಅನೇಕ ಜನರು ಗಾಯಗೊಂಡರು.

---

ಭಾರತ-ಜಪಾನ್ ರಕ್ಷಣಾ ಸಚಿವರ ಸಭೆ ಇಂದು ನವದೆಹಲಿಯಲ್ಲಿ ನಡೆಯಿತು. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಜಪಾನ್ ರಕ್ಷಣಾ ಸಚಿವ ಶಿಂಜಿರೊ ಕೊಯಿಜುಮಿ, ಸಭೆಯ ಜಂಟಿ ಅಧ್ಯಕ್ಷತೆ ವಹಿಸಿದ್ದರು.

ಸಮುದ್ರ ಭದ್ರತೆಯನ್ನು ಬಲಪಡಿಸುವುದು, 'ಮೇಕ್ ಇನ್ ಇಂಡಿಯಾ' ಉಪಕ್ರಮ ಬಲಿಷ್ಠಗೊಳಿಸುವುದು, ರಕ್ಷಣಾ ತಂತ್ರಜ್ಞಾನ ಮತ್ತು ಕಾರ್ಯತಂತ್ರದ ವಿಶ್ವಾಸವನ್ನು ವಿಸ್ತರಿಸುವ ಕುರಿತು ಚರ್ಚೆಗಳು ಕೇಂದ್ರೀಕೃತವಾಗಿತ್ತು. ಇದೇ ವೇಳೆ ಕಡಲ ಭದ್ರತಾ ಸಹಕಾರದ ಕುರಿತಾದ ಒಪ್ಪಂದಕ್ಕೆ ಉಭಯ ಸಚಿವರು ಸಹಿ ಹಾಕಿದರು.

ನಂತರ ಮಾತನಾಡಿದ ಸಚಿವ ರಾಜನಾಥ್ ಸಿಂಗ್, ಜಪಾನ್‌ನ ಕುಮಾಮೊಟೊ ಪ್ರದೇಶದಲ್ಲಿ ಇತ್ತೀಚೆಗೆ ವಿನಾಶಕಾರಿ ಭೂಕಂಪ ಸಂಭವಿಸಿದ್ದು, ಈ ಪ್ರದೇಶದ ಜನರೊಂದಿಗೆ ಭಾರತ ಸರ್ಕಾರವಿದೆ. ಈ ಕಷ್ಟದ ಸಮಯದಲ್ಲಿ ಅಗತ್ಯವಿರುವ ಸಹಾಯ, ಪರಿಹಾರ ಅಥವಾ ಬೆಂಬಲವನ್ನು ಒದಗಿಸಲು ಭಾರತ ಬದ್ಧವಾಗಿದೆ ಎಂದು ಪುನರುಚ್ಚರಿಸಿದರು.

ಭಾರತ-ಜಪಾನ್ ಸಂಬಂಧವು ಪ್ರಜಾಪ್ರಭುತ್ವ ಮೌಲ್ಯಗಳು, ಪರಸ್ಪರ ಗೌರವ ಮತ್ತು ದೀರ್ಘಕಾಲದ ನಾಗರಿಕ ಸಂಪರ್ಕದಲ್ಲಿ ಬೇರೂರಿದೆ. ಮುಂದಿನ ವರ್ಷ ಎರಡೂ ರಾಷ್ಟ್ರಗಳು ರಾಜತಾಂತ್ರಿಕ ಸಂಬಂಧಗಳ ೭೫ ವರ್ಷಗಳನ್ನು ಆಚರಿಸಲಿವೆ ಎಂದು ಅವರು ಹೇಳಿದರು.

ಉಭಯ ದೇಶಗಳ ನಡುವಿನ ಸ್ನೇಹವು ಸ್ಥಿರತೆ, ಸ್ಥಿತಿಸ್ಥಾಪಕತ್ವ ಮತ್ತು ನಿಯಮ ಆಧಾರಿತ ಕ್ರಮದ ಮೂಲಾಧಾರವಾಗಿದೆ. ಇದು ಎರಡೂ ರಾಷ್ಟ್ರಗಳಿಗೆ ಮಾತ್ರವಲ್ಲದೆ, ವಿಶಾಲವಾದ ಇಂಡೋ-ಪೆಸಿಫಿಕ್ ಪ್ರದೇಶಕ್ಕೂ ಸಹ ಪ್ರಮುಖವಾಗಿದೆ. ಏಷ್ಯಾದ ಎರಡು ಪ್ರಮುಖ ಪ್ರಜಾಪ್ರಭುತ್ವ ರಾಷ್ಟ್ರಗಳಾಗಿ, ಭಾರತ ಮತ್ತು ಜಪಾನ್ ಶಾಂತಿ, ಸ್ಥಿರತೆ ಮತ್ತು ಸಮೃದ್ಧಿ ಖಚಿತಪಡಿಸಿಕೊಳ್ಳುವ ಜವಾಬ್ದಾರಿ ಹೊಂದಿವೆ ಎಂದು ಸಚಿವ ರಾಜನಾಥ್ ಸಿಂಗ್ ಪ್ರತಿಪಾದಿಸಿದರು.

---

ಭಾರತ-ಸಿಂಗಾಪುರ ಸಚಿವರ ದುಂಡುಮೇಜಿನ ೩ನೇ ಸುತ್ತಿನ ಸಭೆ ಇಂದು ಸಿಂಗಾಪುರದಲ್ಲಿ ನಡೆಯಿತು. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್.ಜೈಶಂಕರ್, ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಮತ್ತು ಕೇಂದ್ರ ವಾಣಿಜ್ಯ, ಕೈಗಾರಿಕೆ, ಎಲೆಕ್ಟ್ರಾನಿಕ್ಸ್ ಮತ್ತು ಐಟಿ ಖಾತೆ ರಾಜ್ಯ ಸಚಿವ ಜಿತಿನ್ ಪ್ರಸಾದ್ ಸಭೆಯಲ್ಲಿ ಭಾಗವಹಿಸಿದ್ದರು.

ಡಿಜಿಟಲ್ ತಂತ್ರಜ್ಞಾನ, ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ, ಸೆಮಿಕಂಡಕ್ಟರ್ ಪೂರೈಕೆ ಸರಪಳಿ, ಕೃತಕ ಬುದ್ಧಿಮತ್ತೆ ಆಡಳಿತ ಮತ್ತು ಸೈಬರ್ ಭದ್ರತೆ ಸೇರಿದಂತೆ ಕಾರ್ಯತಂತ್ರದ ಮತ್ತು ಉದಯೋನ್ಮುಖ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರ ಮತ್ತಷ್ಟು ಬಲಪಡಿಸುವ ಕುರಿತು ಸಚಿವರು ಚರ್ಚೆ ನಡೆಸಿದರು.

ಸಾಮಾಜಿಕ ಜಾಲತಾಣದಲ್ಲಿ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್, ಉತ್ಪಾದನೆ, ಫಿನ್‌ಟೆಕ್, ಡಿಜಿಟಲೀಕರಣ, ಆರೋಗ್ಯ ರಕ್ಷಣೆ ಮತ್ತು ಸುಸ್ಥಿರತೆಯಾದ್ಯಂತ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಗೊಳಿಸುವ ಕುರಿತು ಚರ್ಚೆಗಳು ನಡೆಯಿತು ಎಂದು ತಿಳಿಸಿದ್ದಾರೆ.

---

ಭಾರತದ ಅಧ್ಯಕ್ಷತೆಯಲ್ಲಿ ಮಹಾರಾಷ್ಟ್ರದ ಪುಣೆಯಲ್ಲಿ ನಾಳೆ ೧೨ನೇ ಬ್ರಿಕ್ಸ್ ಸಂವಹನ ಸಚಿವರ ಸಭೆ ನಡೆಯಲಿದೆ.

ಕೇಂದ್ರ ಸಂವಹನ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಅವರ ಅಧ್ಯಕ್ಷತೆಯಲ್ಲಿ ಸಭೆ ಜರುಗಲಿದೆ. ಮಾಹಿತಿ ಮತ್ತು ಸಂವಹನ ತಂತ್ರಜ್ಞಾನ, ಡಿಜಿಟಲ್ ರೂಪಾಂತರ, ನಾವೀನ್ಯತೆ ಮತ್ತು ಸ್ಥಿತಿಸ್ಥಾಪಕ ಡಿಜಿಟಲ್ ಮೂಲಸೌಕರ್ಯದಲ್ಲಿ ಸಹಕಾರ ಬಲಪಡಿಸುವ ಕುರಿತು ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ಪ್ರತಿನಿಧಿಗಳು ಚರ್ಚೆ ನಡೆಸಲಿದ್ದಾರೆ.

’ಸ್ಥಿತಿಸ್ಥಾಪಕ ಭವಿಷ್ಯಕ್ಕಾಗಿ ನಾವೀನ್ಯತೆ, ಸಹಕಾರ ಮತ್ತು ರೂಪಾಂತರ’ ಎಂಬುದು ಸಭೆಯ ವಿಷಯವಾಗಿದೆ. ಈ ಕಾರ್ಯಕ್ರಮವು ಬ್ರಿಕ್ಸ್ ಸದಸ್ಯ ರಾಷ್ಟ್ರಗಳು, ಉದಯೋನ್ಮುಖ ತಂತ್ರಜ್ಞಾನ, ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ, ಭವಿಷ್ಯದ ನೆಟ್‌ವರ್ಕ್, ಸೈಬರ್ ಭದ್ರತೆ, ಸಾಮರ್ಥ್ಯ ವೃದ್ಧಿ ಮತ್ತು ಅಂತರ್ಗತ ಡಿಜಿಟಲ್ ಸಂಪರ್ಕದ ಕುರಿತು ಅಭಿಪ್ರಾಯ ವಿನಿಮಯ ಮಾಡಿಕೊಳ್ಳಲು ವೇದಿಕೆ ಒದಗಿಸುತ್ತದೆ.

ಬ್ರಿಕ್ಸ್ ದೇಶಗಳು ಮತ್ತು ವಿಶಾಲವಾದ ಜಾಗತಿಕ ದಕ್ಷಿಣದಲ್ಲಿ ಡಿಜಿಟಲ್ ರೂಪಾಂತರ ಬೆಂಬಲಿಸಲು ಪ್ರಾಯೋಗಿಕ ಸಹಕಾರವನ್ನು ಮುಂದುವರಿಸುವುದು ಮತ್ತು ಉತ್ತಮ ಅಭ್ಯಾಸಗಳನ್ನು ಹಂಚಿಕೊಳ್ಳುವುದರ ಮೇಲೆ ಚರ್ಚೆಗಳು ಕೇಂದ್ರೀಕರಿಸಲಿವೆ.

---

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಉತ್ತರಾಖಂಡದ ಮಸ್ಸೂರಿಯಲ್ಲಿರುವ ಲಾಲ್ ಬಹದ್ದೂರ್ ಶಾಸ್ತ್ರಿ ರಾಷ್ಟ್ರೀಯ ಆಡಳಿತ ಅಕಾಡೆಮಿಯಲ್ಲಿ ೨೦೨೪ನೇ ಬ್ಯಾಚ್‌ನ ಐಎಎಸ್ ತರಬೇತಿ ಅಧಿಕಾರಿಗಳಿಗೆ ನೀಡುತ್ತಿರುವ ಎರಡನೇ ಹಂತದ ತರಬೇತಿಯ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸಿವಿಲ್ ಸೇವೆಗಳಲ್ಲಿ ವ್ಯಕ್ತಿತ್ವ ಮತ್ತು ಪ್ರಾಮಾಣಿಕತೆ ಅತ್ಯಂತ ಮುಖ್ಯವಾಗಿದ್ದು, ಕಠಿಣ ಸಂದರ್ಭಗಳಲ್ಲಿಯೂ ನೈತಿಕವಾಗಿ ಕಾರ್ಯನಿರ್ವಹಿಸುವ ಸಾಮರ್ಥ್ಯವೇ ನಿಜವಾದ ನಾಯಕತ್ವದ ಮಾನದಂಡ ಎಂದು ಹೇಳಿದರು.

ಯುವ ಅಧಿಕಾರಿಗಳು ಟೀಕೆಗಳಿಗೆ ವಿಚಲಿತರಾಗದೆ, ಜನಕಲ್ಯಾಣ ಹಾಗೂ ಸಾರ್ವಜನಿಕ ಸೇವೆಗೆ ಸಮರ್ಪಿತರಾಗಿ ಕಾರ್ಯನಿರ್ವಹಿಸುವಂತೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಕರೆ ನೀಡಿದರು.

---

ರಾಷ್ಟ್ರೀಯ ಪರೀಕ್ಷಾ ಕೇಂದ್ರವನ್ನು ಪುನರ್ರಚಿಸುವುದು ಮತ್ತು ಜಾಗತಿಕ ಮಾನದಂಡಗಳ ಪೂರೈಕೆ ಖಚಿತಪಡಿಸಿಕೊಳ್ಳುವ ನಿಟ್ಟಿನಲ್ಲಿ ಪರೀಕ್ಷಾ ಸೌಲಭ್ಯಗಳನ್ನು ಬಲಪಡಿಸುವ ಕುರಿತು ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವ ಪ್ರಲ್ಹಾದ್ ಜೋಶಿ ಅವರು, ಕೇಂದ್ರ ಗ್ರಾಹಕ ವ್ಯವಹಾರಗಳ ಇಲಾಖೆಯ ಕಾರ್ಯದರ್ಶಿ ನಿಧಿ ಖರೆ ಅವರೊಂದಿಗೆ ನವದೆಹಲಿಯಲ್ಲಿ ಇಂದು ಚರ್ಚಿಸಿದರು.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ನೀಡಿದ ಸಚಿವ ಪ್ರಲ್ಹಾದ್ ಜೋಶಿ, ಸಭೆಯಲ್ಲಿ, ಗುಣಮಟ್ಟದ ಭರವಸೆಯನ್ನು ಬೆಂಬಲಿಸುವ, ಗ್ರಾಹಕರ ರಕ್ಷಣೆಯನ್ನು ಬಲಪಡಿಸುವ ಹಾಗೂ ಉತ್ಪನ್ನಗಳ ಗುಣಮಟ್ಟ ಮತ್ತು ಸುರಕ್ಷತೆ ಹೆಚ್ಚಿಸುವ ನಿಟ್ಟಿನಲ್ಲಿ ದೃಢವಾದ, ಭವಿಷ್ಯಕ್ಕೆ ಸಿದ್ಧವಾದ ಪರೀಕ್ಷಾ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವತ್ತ ಒತ್ತು ನೀಡಲಾಗಿದೆ. ಪರೀಕ್ಷಾ ಮೂಲಸೌಕರ್ಯವನ್ನು ಆಧುನೀಕರಿಸುವುದು, ತಾಂತ್ರಿಕ ಸಾಮರ್ಥ್ಯ ಹೆಚ್ಚಿಸುವ ಕುರಿತು ಚರ್ಚೆ ನಡೆಸಲಾಯಿತು ಎಂದು ತಿಳಿಸಿದ್ದಾರೆ.

---

ಜಾರ್ಖಂಡ್ ಲೋಕಸೇವಾ ಆಯೋಗ ಮತ್ತು ಜಾರ್ಖಂಡ್ ಸಿಬ್ಬಂದಿ ನೇಮಕಾತಿ ಆಯೋಗ ನಡೆಸಿದ ಹಲವಾರು ಪರೀಕ್ಷೆಗಳನ್ನು ರದ್ದುಪಡಿಸಿದ ರಾಜ್ಯ ಸರ್ಕಾರದ ನಿರ್ಧಾರಕ್ಕೆ ಜಾರ್ಖಂಡ್ ಹೈಕೋರ್ಟ್ ತಡೆಯೊಡ್ಡಿದೆ.

ಈ ತಡೆಯಿಂದಾಗಿ, ಈಗಾಗಲೇ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರುವ, ಅತಂತ್ರ ಸ್ಥಿತಿ ಅನುಭವಿಸುತಿದ್ದ ಅಭ್ಯರ್ಥಿಗಳು ನಿರಾಳರಾಗಿದ್ದಾರೆ. ರಾಜ್ಯ ಸರ್ಕಾರ ಏಕಪಕ್ಷೀಯವಾಗಿ ಪರೀಕ್ಷೆಗಳನ್ನು ರದ್ದುಪಡಿಸಿರುವುದು ಸ್ವಾಭಾವಿಕ ನ್ಯಾಯದ ವಿರುದ್ಧ ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ.

ಈಗಾಗಲೇ ನಡೆದ ೨೨ ನೇಮಕಾತಿ ಪರೀಕ್ಷೆಗಳನ್ನು ರದ್ದುಪಡಿಸಿದ ಜಾರ್ಖಂಡ್ ಸರ್ಕಾರದ ನಿರ್ಧಾರದ ವಿರುದ್ಧ ನಾಲ್ಕು ಅರ್ಜಿಗಳು ಸಲ್ಲಿಕೆಯಾಗಿದ್ದವು.

---

'ವಂದೇ ಮಾತರಂ' ಗೀತೆಯನ್ನು ಪೂರ್ಣ ಹಾಡುವ ಬದಲು ಕೇವಲ ಎರಡು ಚರಣಗಳನ್ನು ಹಾಡುವ ಕಾಂಗ್ರೆಸ್ ಕಾರ್ಯಕಾರಿ ಸಮಿತಿಯ ನಿರ್ಧಾರವನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಟೀಕಿಸಿದ್ದಾರೆ.

ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ನಿರ್ಧಾರವು ಸಂಸತ್ತು ಜಾರಿಗೆ ತಂದ ಕಾನೂನಿಗೆ ವಿರುದ್ಧವಾಗಿದೆ ಮತ್ತು ಇದು ರಾಷ್ಟ್ರ ವಿರೋಧಿಯಾಗಿದೆ. ಓಲೈಕೆಗಾಗಿ ೧೯೩೭ ರಲ್ಲಿ

ಕಾಂಗ್ರೆಸ್, 'ವಂದೇ ಮಾತರಂ' ಅನ್ನು ಎರಡು ಭಾಗಗಳಾಗಿ ವಿಂಗಡಿಸಿತ್ತು ಎಂದು ಆರೋಪಿಸಿದರು.

'ವಂದೇ ಮಾತರಂ' ಗೀತೆಯ ೧೫೦ನೇ ವಾರ್ಷಿಕೋತ್ಸವದಂದು, ಕೇಂದ್ರ ಸರ್ಕಾರ, ಈ ಐತಿಹಾಸಿಕ ತಪ್ಪನ್ನು ಸರಿಪಡಿಸಿ, ಪೂರ್ಣ ಗೀತೆಗೆ ಕಾನೂನು ಮಾನ್ಯತೆ ನೀಡಿದೆ. ರಾಹುಲ್ ಗಾಂಧಿಯವರ ನೇತೃತ್ವದಲ್ಲಿ ಕಾಂಗ್ರೆಸ್, ಮತಬ್ಯಾಂಕ್ ರಾಜಕೀಯಕ್ಕಾಗಿ ಮತ್ತೊಮ್ಮೆ ಓಲೈಕೆ ಹಾದಿಯನ್ನು ಅನುಸರಿಸುತ್ತಿದೆ ಎಂದು ದೂರಿದರು.

ಈ ಕುರಿತು ಪ್ರತಿಕ್ರಿಯಿಸಿದ ಕಾಂಗ್ರೆಸ್ ಸಂಸದ ಕೆ.ಸಿ.ವೇಣುಗೋಪಾಲ್, ಕಾಂಗ್ರೆಸ್ ಪಕ್ಷ ೧೯೩೭ ರಿಂದ ೯೦ ವರ್ಷಗಳಿಗೂ ಹೆಚ್ಚು ಕಾಲ 'ವಂದೇ ಮಾತರಂ' ಹಾಡುತ್ತಿದೆ. ಇದು ಕಾಂಗ್ರೆಸ್‌ಗೆ ಭಾವನಾತ್ಮಕವಾಗಿದೆ. ಆದರೆ ಬಿಜೆಪಿಗೆ ರಾಜಕೀಯವಾಗಿದೆ ಎಂದು ಆರೋಪಿಸಿದ್ದಾರೆ.

________________________

ನವದೆಹಲಿಯಲ್ಲಿ ನಡೆಯುತ್ತಿರುವ ಬಿಡಬ್ಲ್ಯುಎಫ್ ವಿಶ್ವ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್ ಪಂದ್ಯಾವಳಿಯಲ್ಲಿ ಭಾರತದ ತ್ರೀಸಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಜೋಡಿ, ಮಹಿಳಾ ಡಬಲ್ಸ್ ವಿಭಾಗದ ಕ್ವಾರ್ಟರ್‌ಫೈನಲ್ ಪ್ರವೇಶಿಸಿದ್ದಾರೆ.

ಭಾರತೀಯ ಜೋಡಿ, ಜಪಾನ್‌ನ ರಿನ್ ಇವಾನಗಾ ಮತ್ತು ಕೀ ನಕನಿಶಿ ಅವರನ್ನು ನೇರ ಸೆಟ್‌ಗಳಿಂದ ಪರಾಭವಗೊಳಿಸಿ, ಮುಂದಿನ ಹಂತಕ್ಕೆ ಲಗ್ಗೆ ಇಟ್ಟಿದ್ದಾರೆ.

________________________

ನೆದರ್‌ಲ್ಯಾಂಡ್‌ನ ಆಮ್ಸ್ಟೆಲ್ವೀನ್‌ನ ವ್ಯಾಗೆನರ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಎಫ್‌ಐಎಚ್ ಹಾಕಿ ವಿಶ್ವಕಪ್‌ನ ಕೊನೆಯ 'ಪೂಲ್ ಡಿ' ಪಂದ್ಯದಲ್ಲಿ ಭಾರತ ಮತ್ತು ಇಂಗ್ಲೆಂಡ್ ಮಹಿಳಾ ತಂಡಗಳು ಮುಖಾಮುಖಿಯಾಗಿದ್ದು, ಪಂದ್ಯ ಪ್ರಗತಿಯಲ್ಲಿದೆ.

__________ ಮುಕ್ತಾಯ ___________